## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿಬಿಎಂಪಿ ವ್ಯಾಪ್ತಿಯ ಜಯನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ನಿಗಧಿಪಡಿಸಿರುವ ರೂ.60.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾಡಿರುವ ಘೋಷಣೆ.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
3. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (13).
4. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಮುಆ/ಪಿಆರ್/ ಜಿ-385/2022-23, ದಿನಾಂಕ: 28-04-2022.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಾಡಿರುವ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ ಬಿಬಿಎಂಪಿ ಮೂಲಕ ಮುಖ್ಯ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ, ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 25-02-2022 (13) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ಜಯನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.60.00 ಕೋಟಿಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 28-04-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್ ವೈ 2021, ದಿನಾಂಕ: 25.02.2022 (13) ರಲ್ಲಿ ಜಯನಗರ ವಿಧಾನಸಭಾ ಕ್ಷೇತ್ರಕ್ಕೆ ರೂ.60.00 ಕೋಟಿಗಳ

...2/-

ಅನುದಾನ ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ. ಯೋಜನೆಗಳನ್ನು ಶಾಸಕರ ಕೋರಿಕೆಗಳನ್ನು ಪರಿಗಣಿಸಿ, ಸದರಿ ಅನುಮೋದಿತ ಅನುದಾನಕ್ಕೆ ಅನುಗುಣವಾಗಿ ಕ್ರಿಯಾಯೋಜನೆಯನ್ನು ರೂಪಿಸಿ, 15 ದಿನಗಳೊಳಗಾಗಿ ಕ್ರಿಯಾ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಲಾಗಿರುತ್ತದೆ. ಅಂತಿಮಗೊಳಿಸುವಂತೆ ಸೂಚಿಸಲಾಗಿರುತ್ತದೆ.

ಅದರಂತೆ, ಜಯನಗರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರೊಂದಿಗೆ ವಲಯ ಮುಖ್ಯ ಅಭಿಯಂತರರು (ದಕ್ಷಿಣ) ರವರು ಸಭೆ ನಡೆಸಿ, ಚರ್ಚಿಸಿರುವಂತೆ ಮಾನ್ಯ ಶಾಸಕರು 05 ಪ್ಯಾಕೇಜ್ ಕಾಮಗಾರಿಗಳಿಗೆ ಒಟ್ಟು ರೂ.60.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲು ಕೋರಿರುತ್ತಾರೆ. ಆದುದರಿಂದ, ಮಾನ್ಯ ಶಾಸಕರು ಜಯನಗರ ವಿಧಾನಸಭಾ ಕ್ಷೇತ್ರ ರವರು ಕೋರಿರುವಂತೆ ಜಯನಗರ ವಿಧಾನಸಭಾ ಕ್ಷೇತ್ರಕ್ಕೆ ಮೀಸಲಿಟ್ಟಿರುವ ರೂ.60.00 ಕೋಟಿಗಳ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಯ ಪಟ್ಟಿಗೆ ಸರ್ಕಾರದ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 232 ಎಂಎನ್‌ವೈ 2022 (ಇ),**
**ಬೆಂಗಳೂರು, ದಿನಾಂಕ: 18-05-2022.**

ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (13) ರಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ಜಯನಗರ ವಿಧಾನ ಸಭಾ ಕ್ಷೇತ್ರಕ್ಕೆ ರೂ.60.00 ಕೋಟಿಗಳ ಅನುದಾನವನ್ನು ನಿಗದಿಗೊಳಿಸಿ ಆದೇಶಿಸಿದ್ದು, ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯಂತೆ, ಸದರಿ ರೂ.60.00 ಕೋಟಿಗಳ ಅಂದಾಜು ಮೊತ್ತದ ಈ ಕೆಳಕಂಡ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl. No. | Name of work | Est cost in Lakhs | Package Amount in Cr |
|---|---|---|---|
| 01 | **Comprehensive development of roads and Improvements to road side drains footpaths asphalting and concreting roads in ward No. 168 and 169 Jayanagara constituency Package 01** | | **10.50** |
| | Improvements to drains and Roads to Cross roads and Main roads in 3rd Block Jayanagara in Ward No: 168 Pattabhirama nagara | 200.00 | |
| | Improvements to drains and Roads to Cross roads and main roads in 4th Block and 4th 'T' Block Jayanagara in Ward No: 168 Pattabhirama nagara | 200.00 | |

. . .3/-

Scanned with Oken Scanner

| | | | |
|---|---|---|---|
| | Improvements to drains and roads to Moutain Street, opposite to Swimming pool Jayanagara and Surrounding area in Ward No: 169 Byrasandra | 200.00 | |
| | Construction of RO plant in ward 168, 169 and 170 in Jayanagara division | 100.00 | |
| | Improvements to drains Roads and footpath Vasavi temple, Anjaneya Temple, Byrasandra Village, 4th Block jayanagara and Surrounding area in Ward No: 169 Byrasandra | 150.00 | |
| | Improvements to drains and roads to LIC Colony, cross roads of 8th main road, KV Layout, Canara Bank Colony, official Colony, 1st block East and Surrounding area in Ward No: 169 Byrasandra | 200.00 | |
| 02 | **Comprehensive development of roads and Improvements to road side drains footpaths asphalting and concreting roads in ward No. 170 and 171 Jayanagara Constituency of south Package 02** | | **16.00** |
| | Improvements to drains and Asphalting at Puttaiahna palya, 26 'A' & 26 'B' Main Road , 8 'A' & 8 'B' Main Road, old Gurappanapalya and surrounding area in Ward No: 170 Jayanagara East | 200.00 | |
| | Improvements to drains and Asphalting to 2nd Main to 7th Main Road in KEB layout, Thilakanagar, NAL Layout, 9th Block Jayanagar and surrounding area in Ward No: 170 Jayanagara East | 150.00 | |
| | Improvements to drains and Foot path to 38 'A' & 38 'B' Cross Road, 1st 'B' Cross Road in Gurappanapalya and surrounding area in Ward No: 170 Jayanagara East | 200.00 | |
| | Comprehensive development of drains and roads to 9th A Main , 9th B Main, 9th C Main and 9th D Main, 4th Cross, 3rd Cross road and Surrounding areas in ward No: 171 Gurappanapalya | 200.00 | |
| | Comprehensive development of drains and roads to Narayappa Garden, Krishnappa Garden, Maruthi Layout and Surrounding areas in ward No: 171 Gurappanapalya | 200.00 | |
| | Improvements to drains and roads to 3rd Cross, 4th Cross, 7th Cross, H Cross, J Cross, F Cross Bismilla nagara and remaing UGD work in ward No: 171 Gurappanapalya | 200.00 | |
| | Comprehensive development of Madar Sab Layout, Avalamma Temple, 5th Main road, 6th main road, UCO Bank Old Gurappanapalya and Surrounding areas in ward No: 171 Gurappanapalya | 200.00 | |
| | Improvements to drains and Asphalting to 6th Cross, 8th Cross, 2nd Main road , 5th Cross Janda Galli at New Gurappanapalya and remaing UGD work in ward No: 171 Gurappanapalya | 200.00 | |
| | Improvements to drains and Asphalting to 12th Main, and 10th Main and BTM 1st Stage in ward No: 171 Gurappanapalya | 50.00 | |
| 03 | **Comprehensive development of roads and Improvements to road side drains footpaths asphalting and concreting roads in ward No. 177, 178 and 179 Jayanagara Constituency of south Package 03** | | **11.50** |
| | Improvements to Yellamma Temple Surrounding area and Providing Indoor Gym @ 2nd floor BBMP Building Opp. To Renuka Prasanna Theatre in ward No. 177 | 150.00 | |



Scanned with Oken Scanner

| | | | |
|---|---|---|---|
| | Improvements to roads and drain in 2nd phase and 3rd phase in ward No. 177. | 150.00 | |
| | Improvements and Road and drains in Weavers Colony, 5th phase, 6th Phase and Surrounding area in Ward No. 178 | 200.00 | |
| | Improvements to roads & drains 2nd Phase, Sarakki Village and Surrouding area in Ward No. 178 | 200.00 | |
| | Improvements to roads & drains 8th Block, 5th Block Jayanagar, BSNL Compound and Surrounding area in Ward No. 179 | 250.00 | |
| | Improvements to roads & drains in ITI Layout, Shakambarinagara and Surrounding area in Ward No. 179 | 200.00 | |
| **04** | **Comprehensive Development of Shalini Playground, Pu.Ti.Na Park, Mini Forest Park, 5th Main Buleward Park at 4th and 5th Block, Jayanagar and Construction of Multipurpose Building in Arasu Colony, improvements to PHC & also other Balance improvemental works to Parks, Play ground, Multipurpose Building in surrounding area of Jayanagar Assembly Constituency** | | **18.00** |
| | Construction of Multi purpose Building at Arasu Colony and other developmental works to surrounding area in Ward No.170 Jayanagar East | 190.00 | |
| | Construction of 168 Pattabirama nagar Ward Office and additional improvements to Jayanagar MLA Office and other improvements to surrounding area in Ward No.168 | 150.00 | |
| | Improvements to existing Sports Building at Kittur Rani Chennamma ground and also to provide Synthetic track to Running track and other improvements to ground and building in Ward No.169 | 190.00 | |
| | Construction of Security room, Toilet at 30th Main Road,10th B cross BBMP Playground (Adjacent to Oxford School) at J.P.Nagar 1st Phase and Other improvements to surrounding area parks/ Playground in Ward No.178 | 190.00 | |
| | Additional improvements to Stage Building at Shalini Ground/ Chandra Gupta Mourya Playground and Construction of Gallery for Seating arragements and additional improvements /repairs to Pu.Ti.Na Park and other improvements to Surrounding area Parks in ward No.179 | 190.00 | |
| | Construction of Security room and other improvements to Freedom Park at 10th Main Road and 2nd Cross Road Parks in Dollars Colony, J.P.Nagar 4th Phase and surrounding area parks in Ward No.177 | 110.00 | |
| | Construction of Security room and other improvements to Parks at 5th Main Road adjacent to Jayanagar Metro Station and additional improvements to Akka Mahadevi park by Providing shelter to statute and other improvements to Surrounding area Parks in ward No.168 | 150.00 | |
| | Balance Development of Ranka Ground (Opposite Janardhan Govt School) by Providing Tubular truss with Tensile roofing and other improvements to surrounding area in ward No.170 | 190.00 | |

. . .5/-

Scanned with Oken Scanner

| | | | |
|---|---|---|---|
| | Improvements to J.P Nagar cultural Building and additional development to Parks at 11th B Cross, 32nd Main Road Park at J.P.Nagar 1st Phase and surrouding area parks in Ward No.178 | 150.00 | |
| | Construction of security room and Toilets for publics and Repairs to Anand Vana Park and Other Adjacent Parks in Mini Forest, J.P.Nagar between 1st and 2nd Main Road in Ward No.177 | 100.00 | |
| | Improvements to Sarakki Market Park at 9th cross (Near Shiva temple) and 31st Main Road, 17th Cross Park (Shri Kashi Vishwanatha Temple Park) and surrounding area parks in J.P. Nagar 6th Phase in Ward No.178 | 90.00 | |
| | Improvements to Primary health centre in Sarakki J.P Nagar Ward No.178 | 100.00 | |
| 05 | **Comprehensive Development of Street lighting with Accessories Like Control switch etc and Illumination to Major Roads with replacement of Deterioted street poles with light fitting, Installion of poles with suitable lights in dark Stretches of all types of roads, Playground, Parks in all wards coming under Jayanagar Assembly Constituency.** | | **4.00** |
| | Providing Street Lighting, Parks Lighting, Playgrounds Lighting, in Wad No. 169, 170, 171 Under Jayanagara Constituency. | 120.00 | |
| | Providing Street Lighting, Parks Lighting, Playgrounds Lighting, in Wad No. 168, 179 Under Jayanagara Constituency. | 110.00 | |
| | Providing Street Lighting, Parks Lighting, Playgrounds Lighting, in Wad No. 177, 178 Under Jayanagara Constituency. | 110.00 | |
| | Providing Electrical Infrastructures to Jayanagara Shopping Complex in Ward No. 169. | 60.00 | |
| | **Total Amount** | **6000.00** | **60.00 Cr** |

<u>ಷರತ್ತುಗಳು:</u>

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಜಯನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.60.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.60.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.

2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016, ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.

...6/

Scanned with Oken Scanner

3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.
5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.
6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.
8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.
9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾರ್ವಜನಿಕ ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

18/05

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

...7/-

Scanned with Oken Scanner

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
6. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with Oken Scanner